# All India Radio: Bangalore
# National Bulletin In Kannada
# 15.10.2026  19.35 hrs
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

---

ಮುಖ್ಯಾಂಶಗಳು

- ಲಡಾಖ್‌ನ 3 ಸಾವಿರದ 350 ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಭಾರತೀಯ ವಾಯುಪಡೆಗೆ ಸಂವಹನ ಉಪಗ್ರಹ, ನೌಕಾಪಡೆಗೆ 'ವರುಣಾಸ್ತ್ರ' ಟಾರ್ಪಿಡೊಗಳ ಖರೀದಿಗೆ ರಕ್ಷಣಾ ಸಚಿವಾಲಯ ಅನುಮೋದನೆ
- ಹಿಂದೂ ಧರ್ಮದಿಂದ ಇತರ ಧರ್ಮಗಳಿಗೆ ಮತಾಂತರಗೊಂಡ ವ್ಯಕ್ತಿಗಳು, 'ಹಿಂದುಳಿದ ವರ್ಗ'ದ ಅಡಿಯಲ್ಲಿ ಮೀಸಲಾತಿ ಸೌಲಭ್ಯ ಪಡೆಯಲು ಸಾಧ್ಯವಿಲ್ಲ – ಸುಪ್ರೀಂ ಕೋರ್ಟ್
- ಏಷ್ಯನ್ ಗೇಮ್ಸ್‌ನಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳೊಂದಿಗೆ ಪ್ರಧಾನಿ ಸಂವಾದ
- ವಿಶ್ವ ಕುಸ್ತಿ ಚಾಂಪಿಯನ್‌ಶಿಪ್: ಗ್ರೀಕೋ–ರೋಮನ್ ವಿಭಾಗದಲ್ಲಿ ಭಾರತದ ವಿಶ್ವಜಿತ್ ರಾಮಚಂದ್ರ ಮೋರೆಗೆ ಬೆಳ್ಳಿ

---

ಲಡಾಖ್‌ನಲ್ಲಿ ಸುಮಾರು 3 ಸಾವಿರದ 350 ಕೋಟಿ ರೂಪಾಯಿ ಮೌಲ್ಯದ ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ರಾಷ್ಟ್ರಕ್ಕೆ ಸಮರ್ಪಿಸಿದರು.

ಈ ಯೋಜನೆಗಳು ಸಂಪರ್ಕ ವ್ಯವಸ್ಥೆ ಬಲಪಡಿಸುವುದು, ಇಂಧನ ಮೂಲಸೌಕರ್ಯ ಸುಧಾರಿಸುವುದು, ಸಾಂಸ್ಕೃತಿಕ ಪರಂಪರೆ ಸಂರಕ್ಷಿಸುವುದು ಹಾಗೂ ಜಲ ಭದ್ರತೆ ಹೆಚ್ಚಿಸುವ ಗುರಿ ಹೊಂದಿವೆ.

ಲೇಹ್‌ನ ಕುಶೋಕ್ ಬಕುಲಾ ರಿಂಪೋಚೆ ವಿಮಾನ ನಿಲ್ದಾಣದ ನೂತನ ಪ್ರಯಾಣಿಕರ ಟರ್ಮಿನಲ್, 298 ಕಿಲೋಮೀಟರ್ ಉದ್ದದ ನಿಮ್ಮು–ಪದುಮ್–ದರ್ಚಾ ರಸ್ತೆ, 9 ಮೆಗಾವಾಟ್ ಸಾಮರ್ಥ್ಯದ ಹನು ಕಿರು ಜಲವಿದ್ಯುತ್ ಯೋಜನೆ ಹಾಗೂ ದಹ್–ಹನು–ಖಾಲ್ಸ್ತಿ 66 ಕೆವಿ ವಿದ್ಯುತ್ ಪ್ರಸರಣ ಮಾರ್ಗ ಈ ಯೋಜನೆಗಳಲ್ಲಿ ಸೇರಿವೆ.

ಇದೇ ವೇಳೆ ಲೇಹ್‌ನ ಸಿಂಧು ಘಾಟ್‌ನಲ್ಲಿ ಭಾರತದ ಮೊದಲ ಶಿಲಾಕೃತಿಗಳ ಸಂರಕ್ಷಣಾ ಉದ್ಯಾನ ಹಾಗೂ ಹಿಮ ಸರೋವರ ಯೋಜನೆಯಡಿ 40 ಗ್ರಾಮಗಳಲ್ಲಿ ಅಭಿವೃದ್ಧಿಪಡಿಸಿರುವ 40 ಜಲಮೂಲಗಳಿಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಚಾಲನೆ ನೀಡಿದರು.

---

ಭಾರತೀಯ ವಾಯುಪಡೆಗೆ ಜಿಎಸ್‌ಎಟಿ-7ಸಿ ಸಂವಹನ ಉಪಗ್ರಹ ಹಾಗೂ ನೌಕಾಪಡೆಗೆ 'ವರುಣಾಸ್ತ್ರ' ಟಾರ್ಪಿಡೊಗಳ ಖರೀದಿಗಾಗಿ 4 ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಒಪ್ಪಂದಗಳಿಗೆ ರಕ್ಷಣಾ ಸಚಿವಾಲಯ ಇಂದು ಸಹಿ ಹಾಕಿದೆ.

ಬೆಂಗಳೂರಿನ ನ್ಯೂ ಸ್ಪೇಸ್ ಇಂಡಿಯಾ ಲಿಮಿಟೆಡ್‌ನೊಂದಿಗೆ ಎರಡು ಸಾವಿರದ 500 ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಉಪಗ್ರಹ ಖರೀದಿ ಒಪ್ಪಂದ ಮಾಡಿಕೊಳ್ಳಲಾಗಿದೆ. ದೇಶೀಯವಾಗಿ ವಿನ್ಯಾಸಗೊಳಿಸಿ, ಅಭಿವೃದ್ಧಿಪಡಿಸಿ, ತಯಾರಿಸಲಾದ ಈ ಉಪಗ್ರಹವು ವಾಯುಪಡೆಯ ಸುರಕ್ಷಿತ ಮತ್ತು ನಿರಂತರ ಸಂವಹನ ವ್ಯವಸ್ಥೆಯನ್ನು ಬಲಪಡಿಸಲಿದೆ.

ಇದೇ ವೇಳೆ, ಹೈದರಾಬಾದ್‌ನ ಭಾರತ್ ಡೈನಾಮಿಕ್ಸ್ ಲಿಮಿಟೆಡ್‌ನೊಂದಿಗೆ ಒಂದು ಸಾವಿರದ 500 ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವರುಣಾಸ್ತ್ರ ಟಾರ್ಪಿಡೊ ಖರೀದಿ ಒಪ್ಪಂದಕ್ಕೆ ಸಹಿ ಹಾಕಲಾಗಿದೆ.

ದೇಶೀಯವಾಗಿ ಅಭಿವೃದ್ಧಿಪಡಿಸಿರುವ ಈ ಟಾರ್ಪಿಡೊ, ಶತ್ರು ಜಲಾಂತರ್ಗಾಮಿ ನೌಕೆಗಳನ್ನು ದೂರದಿಂದಲೇ ಗುರಿಯಾಗಿಸಬಲ್ಲದು. ಈ ಒಪ್ಪಂದಗಳು ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸುವ ಹಾಗೂ ಆತ್ಮನಿರ್ಭರ ಭಾರತ ಉಪಕ್ರಮಗಳಿಗೆ ಉತ್ತೇಜನ ನೀಡುವ ಮಹತ್ವದ ಹೆಜ್ಜೆಗಳಾಗಿವೆ ಎಂದು ಸಚಿವಾಲಯ ತಿಳಿಸಿದೆ.

---

ಹಿಂದೂ ಧರ್ಮದಿಂದ ಇಸ್ಲಾಂ ಅಥವಾ ಹಿಂದೂಯೇತರ ಧರ್ಮಗಳಿಗೆ ಮತಾಂತರಗೊಂಡ ವ್ಯಕ್ತಿಗಳು, 'ಹಿಂದುಳಿದ ವರ್ಗ' ದ ಅಡಿಯಲ್ಲಿ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

ಮದ್ರಾಸ್ ಹೈಕೋರ್ಟ್ ತೀರ್ಪಿನ ವಿರುದ್ಧ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಶ್ರೀ ಚಂದ್ರಶೇಖರ್ ಅವರನ್ನೊಳಗೊಂಡ ಪೀಠ, ಧರ್ಮಾಂತರದ ನಂತರ ಹಿಂದಿನ ಜಾತಿಯ ಸಾಮಾಜಿಕ ಹಿಂದುಳಿದ ಸ್ಥಿತಿಯನ್ನು ಮುಂದುವರಿಸಲು ಸಾಧ್ಯವಿಲ್ಲ ಎಂದು ಹೇಳಿದೆ.

ಹಿಂದೂ ಧರ್ಮದಿಂದ ಇಸ್ಲಾಂ ಅಥವಾ ಇತರ ಹಿಂದೂಯೇತರ ಧರ್ಮಗಳಿಗೆ ಮತಾಂತರಗೊಂಡ ಮಾತ್ರಕ್ಕೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಸಮುದಾಯದ ಸದಸ್ಯತ್ವ ದೊರೆಯುವುದಿಲ್ಲ ಎಂದು ನ್ಯಾಯಾಲಯ ತಿಳಿಸಿದೆ. ಸಂವಿಧಾನದ 16ನೇ ವಿಧಿಯಡಿ ಮೀಸಲಾತಿ ಸೌಲಭ್ಯ ಪಡೆಯಲು ಮತಾಂತರಕ್ಕೂ ಮುನ್ನದ ಸಾಮಾಜಿಕ ಸ್ಥಾನಮಾನವೊಂದೇ ಆಧಾರವಾಗಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ.

---

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿನ ಅಕ್ರಮಗಳನ್ನು ಖಂಡಿಸಿ ನ್ಯಾಯಾಲಯದತ್ತ ಮೆರವಣಿಗೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದಂತೆ ಇತರರಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ.

ನ್ಯಾಯಾಂಗದ ಮೇಲೆ ಯಾರೂ ಒತ್ತಡ ಹೇರುವಂತಿಲ್ಲ ಎಂದು ನ್ಯಾಯಾಲಯ ಹೇಳಿದೆ.

ಇದೇ ವೇಳೆ, ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಮತದಾರರ ಹೆಸರುಗಳನ್ನು ಅಳಿಸಲಾಗಿದೆ ಹಾಗೂ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ, ರಾಹುಲ್ ಗಾಂಧಿ ಮತ್ತು ಇತರ ವಿರೋಧ ಪಕ್ಷದ ನಾಯಕರು ಸಲ್ಲಿಸಿರುವ ಪ್ರತ್ಯೇಕ ಅರ್ಜಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರಿಂದಲೂ ಸುಪ್ರೀಂ ಕೋರ್ಟ್ ಪ್ರತಿಕ್ರಿಯೆ ಕೋರಿದೆ.

---

ನೀಟ್–ಪಿಜಿ 2026 ರ ಕೀ ಉತ್ತರಗಳು ಮತ್ತು ಪ್ರತಿಕ್ರಿಯೆ ಬಹಿರಂಗಪಡಿಸುವ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆ ಕೋರಿ ಸಲ್ಲಿಸಲಾದ ಅರ್ಜಿಯ ಕುರಿತು ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರ ಮತ್ತು ರಾಷ್ಟ್ರೀಯ ವೈದ್ಯಕೀಯ ಆಯೋಗದಿಂದ ಪ್ರತಿಕ್ರಿಯೆಗಳನ್ನು ಕೋರಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್.ನರಸಿಂಹ ಮತ್ತು ಅಲೋಕ್ ಆರಾಧೆ ಅವರಿದ್ದ ನ್ಯಾಯಪೀಠ, ಅಧಿಕಾರಿಗಳಿಗೆ ನೋಟಿಸ್ ಜಾರಿಗೊಳಿಸಿ, ಅರ್ಜಿಯನ್ನು ಬಾಕಿ ಇರುವ ಅರ್ಜಿಗಳೊಂದಿಗೆ ಸೇರಿಸಿದೆ.

ನೀಟ್–ಪಿಜಿ 2026 ಅನ್ನು ಆಗಸ್ಟ್ 30 ರಂದು ನಡೆಸಲಾಯಿತು. ಜೈಪುರದ ಪರೀಕ್ಷಾ ಕೇಂದ್ರವೊಂದರಲ್ಲಿ ತಾಂತ್ರಿಕ ಅಡಚಣೆಯಿಂದ ಅಲ್ಲಿನ ಅಭ್ಯರ್ಥಿಗಳಿಗೆ ಸೆಪ್ಟೆಂಬರ್ 5 ರಂದು ಪೂರಕ ಪರೀಕ್ಷೆ ನಡೆಸಲಾಯಿತು.

---

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ.
ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಆಯುಷ್ಮಾನ್ ಭಾರತ್ ಪಿಎಂ–ಜೆಎವೈ' ಕುರಿತ ಒಂದು ವರದಿ ಇಲ್ಲಿದೆ.

ಬಡ ಮತ್ತು ನಿರ್ಗತಿಕ ಕುಟುಂಬಗಳಿಗೆ ವರ್ಷಕ್ಕೆ 5 ಲಕ್ಷದವರೆಗೆ ನಗದುರಹಿತ ಆರೋಗ್ಯ ವಿಮೆಯನ್ನು ಒದಗಿಸುವ ಉದ್ದೇಶದಿಂದ 2018 ರಲ್ಲಿ ಪ್ರಾರಂಭವಾದ ಆಯುಷ್ಮಾನ್ ಭಾರತ್–ಪಿಎಂ–ಜೆಎವೈ ಯೋಜನೆಯು ಬಡತನ ಮತ್ತು ಆರೋಗ್ಯ ಸೇವೆಯ ನಡುವಿನ ಸಂಬಂಧವನ್ನೇ ಬದಲಾಯಿಸಿದೆ.

ಪ್ರತಿ ಕುಟುಂಬಕ್ಕೆ ವಾರ್ಷಿಕ 5 ಲಕ್ಷ ರೂಪಾಯಿ ವರೆಗಿನ ನಗದು ರಹಿತ ಚಿಕಿತ್ಸಾ ರಕ್ಷಣೆಯನ್ನು ಒದಗಿಸುವ ಈ ಯೋಜನೆಯು, ಭಾರತದ ಶೇಕಡ 40ರಷ್ಟು ಬಡ ಜನಸಂಖ್ಯೆಯನ್ನು ಗುರಿಯಾಗಿಸಿಕೊಂಡಿದೆ.

ಒಟ್ಟು ಆಯುಷ್ಮಾನ್ ಕಾರ್ಡ್‌ಗಳಲ್ಲಿ ಸುಮಾರು ಶೇಕಡಾ 49ರಷ್ಟು ಮತ್ತು ಅಧಿಕೃತ ಆಸ್ಪತ್ರೆ ದಾಖಲಾತಿಗಳಲ್ಲಿ ಸುಮಾರು ಶೇಕಡಾ 48ರಷ್ಟು ಮಹಿಳೆಯರೇ ಇದ್ದಾರೆ. ಸಾಮಾಜಿಕ-ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೆ, 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ನಾಗರಿಕರನ್ನು ಒಳಗೊಳ್ಳುವಂತೆ ಈ ಯೋಜನೆಯನ್ನು ಮತ್ತಷ್ಟು ವಿಸ್ತರಿಸಲಾಗಿದೆ.

ಆಯುಷ್ಮಾನ್ ವಯ ವಂದನಾ ಕಾರ್ಡ್ ಆದಾಯದ ಮಿತಿಯಿಲ್ಲದೆ 6 ಕೋಟಿ ಹಿರಿಯ ನಾಗರಿಕರಿಗೆ ವಿಸ್ತರಿಸಲ್ಪಟ್ಟಿದೆ – ಇದು ಭಾರತದ ಹಿರಿಯ ನಾಗರಿಕರಿಗೆ ಆರೋಗ್ಯ ರಕ್ಷಣೆಯ ಭರವಸೆಯನ್ನು ಒದಗಿಸುತ್ತದೆ.

---

ಅಮೆರಿಕದ ಇಲಿನಾಯ್ಸ್‌ನ ಅರೋರಾ ಪ್ರದೇಶದಲ್ಲಿರುವ ಹಿಂದೂ ದೇವಾಲಯವೊಂದನ್ನು ಗುರಿಯಾಗಿಸಿಕೊಂಡು ಸಾಮೂಹಿಕ ಗುಂಡಿನ ದಾಳಿ ನಡೆಸಲು ಸಂಚು ರೂಪಿಸಲಾಗಿತ್ತು ಎಂಬ ವರದಿಗಳ ಬಗ್ಗೆ ಭಾರತ ತೀವ್ರ ಕಳವಳ ವ್ಯಕ್ತಪಡಿಸಿದೆ.

ಅಮೆರಿಕದಲ್ಲಿ ನಡೆದ ಈ ಘಟನೆಯ ಕುರಿತು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಈ ಸಂಚಿನಲ್ಲಿ ಹಿಂದೂ ವಿರೋಧಿ ಮತ್ತು ಜನಾಂಗೀಯ ದ್ವೇಷದ ಅಂಶಗಳಿರುವುದು ಹಾಗೂ ಭಾರತೀಯ ಮೂಲದ ಜನರ ವಿರುದ್ಧ ಹಿಂಸಾಚಾರ ನಡೆಸುವ ಉಲ್ಲೇಖಗಳಿರುವುದು ಅತ್ಯಂತ ಆತಂಕಕಾರಿ ವಿಷಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

---

2026ರ ಏಷ್ಯನ್ ಗೇಮ್ಸ್‌ನಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳೊಂದಿಗೆ ನವದೆಹಲಿಯಲ್ಲಿ ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ, ರಾಜ್ಯ ಸಚಿವೆ ರಕ್ಷಾ ಖಡ್ಸೆ ಹಾಗೂ ಭಾರತೀಯ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷೆ ಪಿ.ಟಿ. ಉಷಾ ಉಪಸ್ಥಿತರಿದ್ದರು.

ಜಪಾನ್‌ನ ಐಚಿ–ನಗೋಯಾದಲ್ಲಿ ನಡೆದ ಏಷ್ಯನ್ ಗೇಮ್ಸ್‌ನಲ್ಲಿ ಭಾರತ 21 ಚಿನ್ನ, 27 ಬೆಳ್ಳಿ ಮತ್ತು 37 ಕಂಚು ಸೇರಿದಂತೆ ಒಟ್ಟು 85 ಪದಕಗಳನ್ನು ಗೆದ್ದು ಪದಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನ ಗಳಿಸಿದೆ.

---

ಅಮೆರಿಕದ ಲಾಸ್ ವೇಗಾಸ್‌ನಲ್ಲಿ ಇಂದು ನಡೆದ 23 ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಕುಸ್ತಿಪಟು ವಿಶ್ವಜಿತ್ ರಾಮಚಂದ್ರ ಮೋರೆ ಅವರು ಗ್ರೀಕೋ–ರೋಮನ್ ವಿಭಾಗದ ಫೈನಲ್‌ನಲ್ಲಿ ಬೆಳ್ಳಿ ಪದಕ ಗೆದ್ದು ಐತಿಹಾಸಿಕ ಸಾಧನೆ ಮಾಡಿದ್ದಾರೆ.

ಪುರುಷರ 55 ಕೆ.ಜಿ. ವಿಭಾಗದ ಫೈನಲ್‌ನಲ್ಲಿ ಜಾರ್ಜಿಯಾದ ಕೋಬಾ ಕರುಮಿಡ್ಜೆ ವಿರುದ್ಧ ಕೊನೆಯ ಕ್ಷಣದವರೆಗೂ ತೀವ್ರ ಪೈಪೋಟಿ ನಡೆಸಿದ ವಿಶ್ವಜಿತ್, 12–13 ಅಂಕಗಳ ಅಂತರದಿಂದ ಸೋಲನುಭವಿಸಿ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟರು.